ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಪ್ರವಾಸೋದ್ಯಮ ಅಭಿವೃದ್ಧಿ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

291 (328) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು;

(ಆ) ಹಾಸನ ಜಿಲ್ಲೆಯಲ್ಲಿ ಪ್ರವಾಸಿಗರು ಉಳಿದುಕೊಳ್ಳಲು ಇಲಾಖೆ ವತಿಯಿಂದ ಎಷ್ಟು ಯಾತ್ರಿ ನಿವಾಸಗಳನ್ನು ನಿರ್ಮಿಸಲಾಗಿದೆ; (ವಿವರ ನೀಡುವುದು)

(ಇ) ಟೂರಿಸ್ಟ್ ಟ್ಯಾಕ್ಸಿಗೆ ನೀಡಲಾಗುತ್ತಿರುವ ಸಹಾಯಧನದ ಮೊತ್ತವೆಷ್ಟು; ಅನುಸರಿಸುತ್ತಿರುವ ಮಾನದಂಡಗಳೇನು;

(ಈ) ಕಳೆದ 3 ವರ್ಷಗಳಿಂದ ಹಾಸನ ಜಿಲ್ಲೆಯಲ್ಲಿ ಎಷ್ಟು ಜನ ನಿರುದ್ಯೋಗಿ ಯುವಕರಿಗೆ ಟೂರಿಸ್ಟ್ ಟ್ಯಾಕ್ಸಿ ಸೌಲಭ್ಯವನ್ನು ನೀಡಲಾಗಿದೆ? (ವಿವರಗಳನ್ನು ನೀಡುವುದು)